**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ- 688/2021**
ಚಾಸಾ - 02/ ಫ್ರಾಸಾ - 01

| | |
|---|---|
| ಹೆಸರು | **ಗೋವಿಂದ ರಾಜು** |
| ತಂದೆಯ ಹೆಸರು | **ಲೇ ಟ್ ವೀರಭದ್ರಯ್ಯ** |
| ವಯಸ್ಸು | **44** |
| ಉದ್ಯೋಗ | **ಚಾಲಕ** |
| ವಿಳಾಸ | **ವರ್ತೂರು** |

**ದಿನಾಂಕಃ 14-12-2023 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ-**

ಈಗ ನನಗೆ ಒಂದು ದಾಖಲೆಯನ್ನು ತೋರಿಸಿದ್ದು, ಅದರಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆಯು ಪಂಚನಾಮೆಯಾಗಿದೆ. ಪಂಚನಾಮೆಯನ್ನು ನಿಪಿ-1 ಎಂದು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಾನು ನಿಪಿ-1 ಕ್ಕೆ ಪೋ. ಠಾಣೆಯಲ್ಲಿ ಸಹಿಯನ್ನು ಮಾಡಿರುತ್ತೇನೆ. ನನಗೆ ನಿಪಿ-1 ರಲ್ಲಿ ಇರುವ ವಿಷಯದ ಬಗ್ಗೆ ಮಾಹಿತಿ ಇರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ -**

ದಿ.14-11-2020 ರಂದು ಬೆಳಗ್ಗೆ 10 ರಿಂದ 11 ಗಂಟೆಯ ಸಮಯದಲ್ಲಿ ಘಟನಾ ನಡೆದ ಸ್ಥಳದಲ್ಲಿ ಪೋಲೀಸರು ನಿಪಿ-1 ರಂತೆ ಪಂಚನಾಮೆಯನ್ನು ಮಾಡಿ ನನ್ನಿಂದ ಸಹಿಯನ್ನು ಪಡೆದುಕೊಂಡರು ಎಂದರೆ ಸರಿಯಲ್ಲ. ನನ್ನ ಜೊತೆ ನಿಪಿ-1 ಕ್ಕೆ ಚಾಸಾ-1 ಮತ್ತು 3 ರವರು ಸಹಿಯನ್ನು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-1 ರಲ್ಲಿ ಇರುವ ವಿಷಯವನ್ನು ಪೋಲೀಸರು ನನಗೆ ಓದಿ ತಿಳಿಸಿದ ನಂತರ ನಾನು ಅರ್ಥ ಮಾಡಿಕೂಂಡು ಸಹಿಯನ್ನು ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಯು ನನಗೆ ಪರಿಚಯಸ್ತರು ಎಂದರೆ ಸರಿ. ಆರೋಪಿಯು ನನಗೆ ಪರಿಚಯಸ್ತರಾದ ಕಾರಣದಿಂದ ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿಸಿದ್ದರು ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು -ಆರೋಪಿಯ ಪರ ಶ್ರೀ. ಜಿ.ಹೆಚ್.ಎಂ, ವಕೀಲರಿಂದ**

ಆರೋಪಿಯ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**